ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಕರ್ನಾಟಕ ಗೃಹ ಮಂಡಳಿಯಿಂದ ನಿವೇಶನ ರಹಿತರಿಗೆ ಹಂಚಿಕೆ ಮಾಡುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1017 (1273) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕರ್ನಾಟಕ ಗೃಹ ಮಂಡಳಿ ವತಿಯಿಂದ ನಾಗಮಂಗಲ ತಾಲ್ಲೂಕು, ಬೆಳ್ಳೂರು ಹೋಬಳಿ, ಹಾಲಾಳು ಎಲ್ಲೆ ಪರಿಮಿತಿಯಲ್ಲಿ ನಿವೇಶನ ರಹಿತರಿಗೆ ನಿವೇಶನ ಹಂಚಿಕೆ ಮಾಡಲು ಸ್ಥಳ ಆಯ್ಕೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಎಕರೆ ಜಾಗ ಗುರುತಿಸಲಾಗಿದೆ; (ಸರ್ವೆ ನಂಬರ್ವಾರು ವಿವರ ನೀಡುವುದು)

(ಆ) ಕರ್ನಾಟಕ ಗೃಹ ಮಂಡಳಿಯಲ್ಲಿ ಅರ್ಜಿ ಸಲ್ಲಿಸಿ, ಹಣ ಪಾವತಿ ಮಾಡಿ ಸುಮಾರು ಐದು ವರ್ಷಗಳು ಕಳೆದರೂ ಈವರೆವಿಗೂ ಫಲಾನುಭವಿಗಳಿಗೆ ನಿವೇಶನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ಹಾಗೂ ಫಲಾನುಭವಿಗಳಿಗೆ ಯಾವಾಗ ನಿವೇಶನ ಹಂಚಿಕೆ ಮಾಡಲಾಗುವುದು;

(ಇ) ಮಂಡ್ಯ ಜಿಲ್ಲೆ ವ್ಯಾಪ್ತಿಯ ಗ್ರಾಮ ಪಂಚಾಯಿತಿಯಲ್ಲಿ ಮನೆ ನಿರ್ಮಾಣ ಮಾಡಲು ಆಯ್ಕೆಯಾಗಿ ಕಾರಣಾಂತರಗಳಿಂದ ನಿಗಧಿತ ಕಾಲಮಿತಿಯೊಳಗೆ ಮನೆ ನಿರ್ಮಾಣ ಮಾಡದೆ ಬ್ಲಾಕ್ ಆಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; ಇಂತಹ ಪ್ರಕರಣಗಳನ್ನು ಇತ್ಯರ್ಥಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ತಾಲ್ಲೂಕುವಾ ರು ವಿವರ ನೀಡುವುದು)

(ಈ) ಬ್ಲಾಕ್ ಆಗಿದ್ದು ತಳಪಾಯ ಮತ್ತು ಗೋಡೆ ನಿರ್ಮಾಣದ ಹಂತದಲ್ಲಿರುವ ಫಲಾನುಭವಿಗಳಿಗೆ ಅನುದಾನ ಮಂಜೂರು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?